**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಜಿಲ್ಲಾ ಯೋಜನಾ ಸಮಿತಿಗಳ ವೆಚ್ಚ ಭರಿಸಲು ಪ್ರತಿ ಜಿಲ್ಲೆಗೆ ರೂ.1.00 ಲಕ್ಷಗಳಂತೆ 30 ಜಿಲ್ಲೆಗಳಿಗೆ ರೂ.30.00ಲಕ್ಷಗಳನ್ನು ಬಿಡುಗಡೆಗೊಳಿಸುವ ಕುರಿತು.

ಓದಲಾಗಿದೆ:

ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಪತ್ರ ಸಂಖ್ಯೆ:ಕರಾವಿಯೋ&ಅಸ-11-2019, ದಿನಾಂಕ:20-05-2019.

ಪ್ರಸ್ತಾವನೆ:

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 310ರನ್ವಯ ಪ್ರತಿ ಜಿಲ್ಲೆಯಲ್ಲಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ಯೋಜನೆಯ ಕರಡನ್ನು ಸಿದ್ದಪಡಿಸಲು ಪ್ರತಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾ ಯೋಜನಾ ಸಮಿತಿಯನ್ನು ರಚಿಸಲಾಗಿರುತ್ತದೆ. ಜಿಲ್ಲಾ ಯೋಜನಾ ಸಮಿತಿಯು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ ಸಭಾ ವೆಚ್ಚವನ್ನು ನಿರ್ವಹಿಸಲು ಪ್ರತಿ ಜಿಲ್ಲಾ ಯೋಜನಾ ಸಮಿತಿಗೆ ರೂ.1.00ಲಕ್ಷಗಳ ಅನುದಾನ ಅವಶ್ಯವಿರುತ್ತದೆ. ಈ ಅನುದಾನವನ್ನು 2019-20ನೇ ಸಾಲಿನಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅನುದಾನದ ಲೆಕ್ಕ ಶೀರ್ಷಿಕೆ:2515-00-101-0-09 KPR-103 GIAರಡಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಹಂಚಿಕೆ ಮಾಡಿರುವ ರೂ.300.00ಲಕ್ಷಗಳಲ್ಲಿ ಜಿಲ್ಲಾ ಯೋಜನಾ ಸಮಿತಿಗಳಿಗೆ ತಲಾ ರೂ.1.00ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ ಪತ್ರದನ್ವಯ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತದೆ. ಈ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದ್ದು, ಜಿಲ್ಲಾ ಯೋಜನಾ ಸಮಿತಿಗಳ ಕಾರ್ಯನಿರ್ವಹಣೆಗೆ ತಲಾ ರೂ.1.00ಲಕ್ಷಗಳಂತೆ ಒಟ್ಟಾರೆ ರೂ.30.00ಲಕ್ಷಗಳನ್ನು ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 104 ಜಿಪಸ 2019, ಬೆಂಗಳೂರು, ದಿನಾಂಕ:17-06-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಜಿಲ್ಲಾ ಯೋಜನಾ ಸಮಿತಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ ಪ್ರತಿ ಜಿಲ್ಲಾ ಪಂಚಾಯತಿಗೆ ರೂ.1.00ಲಕ್ಷಗಳಂತೆ 30 ಜಿಲ್ಲಾ ಪಂಚಾಯತಿಗಳಿಗೆ ಒಟ್ಟಾರೆ ರೂ.30.00(ಮೂವತ್ತು ಲಕ್ಷ ರೂಪಾಯಿಗಳು ಮಾತ್ರ)ಲಕ್ಷಗಳನ್ನು 2019-20ನೇ ಸಾಲಿನಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅನುದಾನದ ಲೆಕ್ಕ ಶೀರ್ಷಿಕೆ:2515-00-101-0-09 KPR-103GIAರಡಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಹಂಚಿಕೆಯಾಗಿರುವ ರೂ.300.00ಲಕ್ಷಗಳಿಂದ ಬಿಡುಗಡೆಗೊಳಿಸಲು ಆದೇಶಿಸಿದೆ. ಈ ಅನುದಾನವನ್ನು ಖಜಾನೆ-II ಮೂಲಕ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಬಿಡುಗಡೆಗೊಳಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ: 03-04-2019ರಲ್ಲಿ ಆಯಾ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರು ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

17/6/2019
(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

17.06.19

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.

3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರುಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
5. ಮಾನ್ಯ ಅಧ್ಯಕ್ಷರುಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
6. ಎಲ್ಲಾ ಜಿಲ್ಲಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಕಛೇರಿಗಳು.
7. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
8. ಎಲ್ಲಾ ಮುಖ್ಯ ಯೋಜನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
9. ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ನಗರ ಸ್ಥಳೀಯ ಸಂಸ್ಥೆಗಳನ್ನೊಳಗೊಂಡಂತೆ).
10. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
11. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
12. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ, ಬೆಂಗಳೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
14. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.